ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE: 27/10/20

# ಗ್ರಾಪಂ ಮಟ್ಟದಲ್ಲೇ ವಿಪತ್ತು ನಿರ್ವಹಣೆ

## ಪ್ರಾಕೃತಿಕ ವಿಕೋಪ, ಸಾಂಕ್ರಾಮಿಕ ಕಾಯಿಲೆಗಳ ನಿರ್ವಹಣೆಗಾಗಿ ಯೋಜನೆ ಸಿದ್ಧ

• ರಫೀಕ್ ಅಹ್ಮದ್

ಬೆಂಗಳೂರು: ಗ್ರಾಮೀಣ ಭಾಗದಲ್ಲಿ ಉಂಟಾಗುವ ಪ್ರಾಕೃತಿಕ ವಿಕೋಪಗಳು ಹಾಗೂ ಮಾನವ ಪ್ರೇರಿತ ವಿಪತ್ತುಗಳ ತಡೆ ಮತ್ತು ನಿರ್ವಹಣೆಗೆ 'ಗ್ರಾಮ ಪಂಚಾಯಿತಿ ಮಟ್ಟದ ವಿಪತ್ತು ನಿರ್ವಹಣಾ ಯೋಜನೆ' ಸಿದ್ಧಪಡಿಸಲಾಗಿದೆ.

ದಲ್ಲೇ
ದಲ
ಯೋಗ

ಈವರೆಗೆ ರಾಜ್ಯ ಮಟ್ಟದಲ್ಲಿದ್ದ ವಿಪತ್ತು ನಿರ್ವಹಣಾ ಯೋಜನೆ ಇನ್ನು ಮುಂದೆ ಗ್ರಾಮ ಪಂಚಾಯಿತಿ ಮಟ್ಟದಲ್ಲೂ ಜಾರಿಗೆ ಬರಲಿದೆ. ಗ್ರಾಮೀಣ ಮಟ್ಟದಲ್ಲಿ ಇದನ್ನು ಜಾರಿಗೆ ತರುತ್ತಿರುವ ದೇಶದ ಮೊದಲ ರಾಜ್ಯ ಕರ್ನಾಟಕವಾಗಿದೆ.

ಪ್ರಕೃತಿ ವಿಕೋಪಗಳ ತಡೆ ಮತ್ತು ನಿರ್ವಹಣೆಗೆ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಪ್ರತಿ ವರ್ಷ ಸಮಗ್ರ ನಿರ್ವಹಣಾ ಯೋಜನೆ ರೂಪಿಸಲಾಗುತ್ತಿದ್ದು, ಈ ಬಾರಿ ಗ್ರಾಮ ಪಂಚಾಯಿತಿ ಮಟ್ಟದ ಯೋಜನೆ ಸಿದ್ಧಪಡಿಸಲಾಗಿದೆ.

ಬಿರುಗಾಳಿ, ಪ್ರವಾಹ, ಭೂಕುಸಿತ, ಚಂಡಮಾರುತ


ಸಾಂದರ್ಭಿಕ ಚಿತ್ರ

### ಕಾರ್ಯಗತ ಹೇಗೆ?

ಪ್ರತಿ ಗ್ರಾಪಂ ವ್ಯಾಪ್ತಿಯಲ್ಲಿ ಸಂಭವಿಸಿದ ಹಾಗೂ ಸಂಭವಿಸಬಹುದಾದ ಅಪಾಯಗಳು ಮತ್ತು ಅದನ್ನು ಸಮರ್ಥವಾಗಿ ನಿರ್ವಹಿಸಲು ಬೇಕಾಗುವ ಮೂಲಸೌಕರ್ಯ, ಸಂಪನ್ಮೂಲಗಳ ಮಾಹಿತಿ ಸಂಗ್ರಹಿಸಿ ಅದಕ್ಕೆ ತಕ್ಕಂತೆ ಕ್ರಿಯಾ ಯೋಜನೆ ರೂಪಿಸಲಾಗುತ್ತದೆ. ಇದಕ್ಕಾಗಿ ವಿವಿಧ ಇಲಾಖೆ, ಸಂಘ-ಸಂಸ್ಥೆಗಳು, ಸ್ಥಳೀಯ ಮಟ್ಟದ ತಜ್ಞರ ನೆರವು ಪಡೆದುಕೊಳ್ಳಲಾಗುತ್ತದೆ. ಸ್ಥಳೀಯ ಪರಿಸ್ಥಿತಿ ಆಧರಿಸಿ ಯೋಜನೆ ಜಾರಿಗೆ ಮಾರ್ಗಸೂಚಿ ರೂಪಿಸಲಾಗುತ್ತದೆ.

**ಗ್ರಾಮ ಪಂಚಾಯಿತಿ ಮಟ್ಟದ ವಿಪತ್ತು ನಿರ್ವಹಣಾ ಯೋಜನೆ ಬಗ್ಗೆ ಈಗಾಗಲೇ ವಿಪತ್ತು ನಿರ್ವಹಣಾ ಇಲಾಖೆಯಿಂದ ಪಂಚಾಯಿತಿ ಸಿಬ್ಬಂದಿಗೆ ಎರಡು ಹಂತದ ತರಬೇತಿಯನ್ನು ನೀಡಲಾಗಿದೆ. ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿಯವರನ್ನು ಯೋಜನೆಯ ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ.**

**• ಪ್ರಿಯಾಂಕ ಮೇರಿ ಫ್ರಾನ್ಸಿಸ್, ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ.**

ಮತ್ತು ಮಾನವ ಪ್ರೇರಿತ ವಿಪತ್ತುಗಳ ನಿರ್ವಹಣೆಗೆ 'ವಿಪತ್ತು ನಿರ್ವಹಣಾ ಕಾಯ್ದೆ-2005'ರ ಪ್ರಕಾರ ಕಡ್ಡಾಯವಾಗಿ ರಾಜ್ಯ ಮಟ್ಟದ ಮತ್ತು ಜಿಲ್ಲಾ ಮಟ್ಟದ ಇಲಾಖಾವಾರು ವಿಪತ್ತು ನಿರ್ವಹಣಾ ಯೋಜನೆ ಸಿದ್ಧಪಡಿಸಬೇಕು. ಈ ಬಾರಿ ಕೋವಿಡ್ ಸೇರಿ ಇನ್ನಿತರ ಸಾಂಕ್ರಾಮಿಕ ಕಾಯಿಲೆಗಳ ನಿರ್ವಹಣೆಯನ್ನು ಈ ಯೋಜನೆಯಲ್ಲಿ ಸೇರಿಸಲಾಗಿದೆ. ▶ 6ನೇ ಪುಟಕ್ಕೆ

# ಗ್ರಾಪಂ ಮಟ್ಟದಲ್ಲೇ ವಿಪತ್ತು ನಿರ್ವಹಣೆ

1ನೇ ಪುಟದಿಂದ ▶ **ಸಾವು-ನೋವು ತಡೆಯಲು ಕ್ರಮ:** ಪ್ರಕೃತಿ ವಿಕೋಪಗಳು ಸಂಭವಿಸಿದಾಗ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಿನ ಹಾನಿ, ಸಾವು-ನೋವು ಉಂಟಾಗುವ ಸಾಧ್ಯತೆಯಿರುತ್ತದೆ. ಅದರ ನಿರ್ವಹಣೆಗೆ ಅಲ್ಪಾವಧಿ ಮತ್ತು ದೀರ್ಘಾವಧಿ ಯೋಜನೆಗಳನ್ನು ಸಿದ್ಧಪಡಿಸಿಕೊಂಡರೆ ಹಾನಿ, ಸಾವು-ನೋವು ಹೆಚ್ಚಾಗದಂತೆ ನೋಡಿಕೊಳ್ಳಬಹುದು. ಹಾಗಾಗಿ, ಈ ಬಾರಿಯ ರಾಜ್ಯ ಮಟ್ಟದ ವಿಪತ್ತು ನಿರ್ವಹಣಾ ಯೋಜನೆಯಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ವಿಪತ್ತು ನಿರ್ವಹಣಾ ಯೋಜನೆಗೆ ಒತ್ತು ಕೊಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಇಲಾಖೆ ಅಧಿಕಾರಿಗಳು ಹೇಳುತ್ತಾರೆ.

ಆಯಾ ಪಂಚಾಯಿತಿ ಮಟ್ಟದಲ್ಲಿ ಹಿಂದೆ ಸಂಭವಿಸಿದ್ದ ಪ್ರಕೃತಿ ವಿಕೋಪಗಳ ಆಧಾರದಲ್ಲಿ ಮುಂದೆ ಸಂಭವಿಸಬಹುದಾದ ವಿಪತ್ತುಗಳನ್ನು ಗಮನದಲ್ಲಿಟ್ಟುಕೊಂಡು ಅದಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳಲಾಗುತ್ತದೆ. ಬರಗಾಲದಲ್ಲಿ ಜನರಿಗೆ ಉದ್ಯೋಗ, ಜಾನುವಾರುಗಳಿಗೆ ಮೇವು, ಪ್ರವಾಹ ಸಂದರ್ಭದಲ್ಲಿ ಪುನರ್ವಸತಿ, ಅದರ ನಿರ್ವಹಣೆಗೆ ಶಾಲಾ ಕಟ್ಟಡಗಳು, ಸಮುದಾಯ ಭವನಗಳು, ಖಾಸಗಿ ಕಟ್ಟಡಗಳು, ಈಜುಗಾರರು, ದೋಣಿ, ತೆಪ್ಪ ಅಗ್ನಿಶಾಮಕ ಉಪಕರಣಗಳನ್ನು ಹೊಂದಿಸಿಕೊಳ್ಳುವುದು. ಸಾಂಕ್ರಾಮಿಕ ಕಾಯಿಲೆಗಳು ಉಲ್ಬಣಗೊಂಡಾಗ ವೈದ್ಯಕೀಯ ವ್ಯವಸ್ಥೆಗಳನ್ನು ಮಾಡಿಕೊಳ್ಳುವುದು. ಹೆಚ್ಚಿನ ಮೂಲಸೌಕರ್ಯ ಹಾಗೂ ಹಣಕಾಸಿನ ನೆರವಿಗೆ ಜಿಲ್ಲಾಡಳಿತದ ನೆರವು ಪಡೆದುಕೊಳ್ಳುವುದು ಇತ್ಯಾದಿಗಳನ್ನು ಯೋಜನೆ ಒಳಗೊಂಡಿರುತ್ತದೆ.

**ಸಾವು-ನೋವು ತಡೆಯಲು ಕ್ರಮ:** ಪ್ರಕೃತಿ ವಿಕೋಪಗಳು ಸಂಭವಿಸಿದಾಗ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಿನ ಹಾನಿ, ಸಾವು-ನೋವು ಉಂಟಾಗುವ ಸಾಧ್ಯತೆಯಿರುತ್ತದೆ. ಅದರ ನಿರ್ವಹಣೆಗೆ ಅಲ್ಪಾವಧಿ ಮತ್ತು ದೀರ್ಘಾವಧಿ ಯೋಜನೆಗಳನ್ನು ಸಿದ್ಧಪಡಿಸಿಕೊಂಡರೆ ಹಾನಿ, ಸಾವು-ನೋವು ಹೆಚ್ಚಾಗದಂತೆ ನೋಡಿಕೊಳ್ಳಬಹುದು. ಹಾಗಾಗಿ, ಈ ಬಾರಿಯ ರಾಜ್ಯ ಮಟ್ಟದ ವಿಪತ್ತು ನಿರ್ವಹಣಾ ಯೋಜನೆಯಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ವಿಪತ್ತು ನಿರ್ವಹಣಾ ಯೋಜನೆಗೆ ಒತ್ತು ಕೊಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಇಲಾಖೆ ಅಧಿಕಾರಿಗಳು ಹೇಳುತ್ತಾರೆ.